# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- 2023-24 ನೇ ಸಾಲಿನ ಮೀನುಗಾರಿಕೆ ಇಲಾಖೆಯ ಲೆಕ್ಕ ಶೀರ್ಷಿಕೆ "2405-ಮೀನುಗಾರಿಕೆ ಮತ್ತು 4405-ಮೀನುಗಾರಿಕೆ ಮೇಲಣ ಬಂಡವಾಳ ವೆಚ್ಚಗಳು" ಅಡಿಯಲ್ಲಿ ಪ್ರಥಮ ಕಂತಿನಲ್ಲಿ ಅನುದಾನ ಬಿಡುಗಡೆ ಮಾಡುವ ಬಗ್ಗೆ.

ಓದಲಾಗಿದೆ:-

1) ಆದೇಶ ಸಂಖ್ಯೆ: ಪಸಂಮೀ ಇ-69 ಮೀಇಯೋ 2023, ಬೆಂಗಳೂರು ದಿನಾಂಕ: 13-04-2023.
2) ಆದೇಶ ಸಂಖ್ಯೆ: ಪಸಂಮೀ ಇ-68 ಮೀಇಯೋ 2023, ಬೆಂಗಳೂರು ದಿನಾಂಕ: 13-04-2023.
3) ಮೀನುಗಾರಿಕೆ ನಿರ್ದೇಶಕರ ಏಕ ಕಡತ ಪತ್ರ ಸಂಖ್ಯೆ: ಮೀನಿ/ಎಂಇಎಫ್/52/2022, ದಿನಾಂಕ: 22-04-2023.

******

## ಪ್ರಸ್ತಾವನೆ:

ಮೇಲೆ ಕ್ರಮ ಸಂಖ್ಯೆ (1)ರಲ್ಲಿ ಓದಲಾದ ಆದೇಶದಲ್ಲಿ, 2023-24ನೇ ಸಾಲಿನಲ್ಲಿ ಮೀನುಗಾರಿಕೆ ಇಲಾಖೆಯ ಯೋಜನೆಗಳನ್ನು ಅನುಷ್ಠಾನಗೊಳಿಸಲು ಲೆಕ್ಕ ಶೀರ್ಷಿಕೆ "2405-ಮೀನುಗಾರಿಕೆ" ಹಾಗೂ "4405-ಮೀನುಗಾರಿಕೆ ಮೇಲಣ ಬಂಡವಾಳ ವೆಚ್ಚಗಳು" ರಾಜ್ಯ ವಲಯದಡಿ ರೂ.4443.73 ಲಕ್ಷಗಳ ಪ್ರಥಮ ಕಂತಿನ ಅನುದಾನ ಬಿಡುಗಡೆ ಮಾಡಿ ಆದೇಶಿಸಲಾಗಿದೆ.

ಮೇಲೆ ಕ್ರಮ ಸಂಖ್ಯೆ (2)ರಲ್ಲಿ ಓದಲಾದ ಆದೇಶದಲ್ಲಿ, ಮೀನುಗಾರಿಕೆ ಇಲಾಖೆಯಲ್ಲಿ ಚಾಲ್ತಿಯಲ್ಲಿರುವ ವಿವಿಧ ರಾಜ್ಯ ವಲಯ, ಕೇಂದ್ರ ವಲಯ ಮತ್ತು ಕೇಂದ್ರ ಪುರಸ್ಕೃತ ಜಿಲ್ಲಾ ಪಂಚಾಯತ್ ಯೋಜನೆಗಳನ್ನು ಸಂಬಂಧಪಟ್ಟ ಹುದ್ದೆಗಳೊಂದಿಗೆ 2023-24ನೇ ಸಾಲಿಗೆ ಮುಂದುವರೆಸಲಾಗಿದೆ.

ಮೇಲೆ ಕ್ರಮ ಸಂಖ್ಯೆ (3)ರಲ್ಲಿ ಓದಲಾದ ನಿರ್ದೇಶಕರು, ಮೀನುಗಾರಿಕೆ ಇಲಾಖೆ ಇವರ ಪತ್ರದಲ್ಲಿ, 2022-23 ನೇ ಸಾಲಿನಲ್ಲಿ ಮೋಟರೀಕೃತ ನಾಡದೋಣಿಗಳಿಗೆ ಸೀಮೆಎಣ್ಣೆ ಸರಬರಾಜು ಮಾಡಲು ಹಿಂದಿನ ಸಾಲಿನ ಬಾಕಿ ಮೊತ್ತ ಮತ್ತು ಇತ್ತೀಚೆಗೆ ಬಿಡುಗಡೆಯಾದ ಸೀಮೆಎಣ್ಣೆ ಎತ್ತುವಳಿಗಾಗಿ ಬೇಕಾಗಿರುವ ಒಟ್ಟು ರೂ.14.90 ಕೋಟಿಗಳ ಅನುದಾನವನ್ನು ಬಿಡುಗಡೆ ಮಾಡಲು ಕೋರಿರುತ್ತಾರೆ.

ಮೀನುಗಾರಿಕೆ ನಿರ್ದೇಶಕರ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, 2023-24 ನೇ ಸಾಲಿನಲ್ಲಿ ಸದರಿ ಯೋಜನೆಯಡಿ ಮೊದಲನೇ ಕಂತಾಗಿ ರೂ.600.00 ಲಕ್ಷಗಳನ್ನು ಬಿಡುಗಡೆ ಮಾಡಿ ಸದರಿ ಲೆಕ್ಕ ಶೀರ್ಷಿಕೆಡಯಡಿ K2 ತಂತ್ರಾಂಶದಲ್ಲಿ ಬಾಕಿ ಉಳಿದ 1,94,22,000/-ಗಳನ್ನು ಮಾತ್ರ ಬಿಡುಗಡೆ ಮಾಡಲು ಸರ್ಕಾರವು ತೀರ್ಮಾನಿಸಿ ಕೆಳಕಂಡಂತೆ ಆದೇಶಿಸಿದೆ.

**ಆದೇಶ ಸಂಖ್ಯೆ: ಪಸಂಮೀ ಇ-69 ಮೀಇಯೋ 2023, ಬೆಂಗಳೂರು ದಿನಾಂಕ: 08-05-2023**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, 2023-24ನೇ ಸಾಲಿನಲ್ಲಿ ಮೀನುಗಾರಿಕೆ ಇಲಾಖೆಯ ಯೋಜನೆಗಳನ್ನು ಅನುಷ್ಠಾನಗೊಳಿಸಲು ಲೆಕ್ಕ ಶೀರ್ಷಿಕೆ "2405-ಮೀನುಗಾರಿಕೆ" ರಾಜ್ಯವಲಯದಡಿ ರೂ.194.22 ಲಕ್ಷ (ಒಂದು ನೂರ ತೊಂಬತ್ತನಾಲ್ಕು ಲಕ್ಷದ

ಇಪ್ಪತ್ತೆರಡು ಸಾವಿರ ರೂಪಾಯಿಗಳು ಮಾತ್ರ) ಗಳನ್ನು ಕೆಳಕಂಡ ಲೆಕ್ಕ ಶೀರ್ಷಿಕೆ ಮುಂದೆ ನಮೂದಿಸಿರುವಂತೆ ಅನುದಾನ ಬಿಡುಗಡೆ ಮಾಡಿ ಆದೇಶಿಸಿದೆ.

(ರೂ.ಲಕ್ಷಗಳಲ್ಲಿ)

| ಕ್ರ. ಸಂ | ಯೋಜನೆಯ ಹೆಸರು | ಲೆಕ್ಕ ಶೀರ್ಷಿಕೆ | ಆಯವ್ಯಯ 2023-24 ರಲ್ಲಿ ಒದಗಿಸಿದ ಅನುದಾನ | 2023-24ರಲ್ಲಿ ಬಿಡುಗಡೆ ಮಾಡಲಾದ ಅನುದಾನ |
|---|---|---|---|---|
| 1) | ಸಾಂಪ್ರದಾಯಿಕ ದೋಣಿಗಳಿಗೆ ಸೀಮೆಎಣ್ಣೆ ಸರಬರಾಜು | 2405-00-103-0-17 | | |
| | ಸಹಾಯಧನ | 106 | 2330.64 | 194.22 |

ಮೇಲ್ಕಂಡಂತೆ ಬಿಡುಗಡೆ ಮಾಡಲಾದ ಅನುದಾನದ ಹಣವನ್ನು ಯಾವ ಉದ್ದೇಶಕ್ಕಾಗಿ ಬಿಡುಗಡೆ ಮಾಡಲಾಗಿದೆಯೋ ಅದೇ ಉದ್ದೇಶಕ್ಕಾಗಿ ಉಪಯೋಗಿಸಿ ಕೊಂಡು ಕಡ್ಡಾಯವಾಗಿ ಹಣ ಬಳಕೆ ಪ್ರಮಾಣ ಪತ್ರವನ್ನು ಸರ್ಕಾರಕ್ಕೆ ಸಲ್ಲಿಸತಕ್ಕದ್ದು. ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮ, 1999 ಮತ್ತು ನಿಯಮಗಳು 2000ಗಳನ್ನು ಹಾಗೂ ಖರೀದಿ ನಿಯಮಗಳನ್ನು ಪಾಲಿಸತಕ್ಕದ್ದು ಮತ್ತು ಆರ್ಥಿಕ ಇಲಾಖೆಯ ಅಧಿಸೂಚನೆ ಸಂಖ್ಯೆ: ಖ2/ಪಿಎಂಯು/92/2015-16, ದಿನಾಂಕ: 27-03-2018ರ ಕ್ರಮ ಸಂಖ್ಯೆ 01 ರಿಂದ 04 ರಲ್ಲಿ ಸೂಚಿಸಿರುವಂತೆ ಅನುಷ್ಠಾನಗೊಳಿಸತಕ್ಕದ್ದು.

ಸದರಿ ವೆಚ್ಚವನ್ನು 2023-24 ನೇ ಸಾಲಿನ ಲೆಕ್ಕ ಶೀರ್ಷಿಕೆ "2405-ಮೀನುಗಾರಿಕೆ" ರಡಿ ಒದಗಿಸಿರುವ ಅನುದಾನದಿಂದ ಭರಿಸತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ: ಎಫ್ ಡಿ/2/ಟಿಎಫ್ ಪಿ/2023, ದಿನಾಂಕ: 01-04-2023ರಲ್ಲಿ ಕಾರ್ಯದರ್ಶಿಗಳಿಗೆ ಪ್ರತ್ಯಾಯೋಜಿಸಿರುವ ವಿತ್ತಾಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

8.5.2023.
(ಕೆ.ಎಂ.ಶುಭಶ್ರೀ)
ಸರ್ಕಾರದ ಅಧೀನ ಕಾರ್ಯದರ್ಶಿ (ಪ್ರ),
ಪಶುಸಂಗೋಪನೆ ಮತ್ತು ಮೀನುಗಾರಿಕೆ ಇಲಾಖೆ
(ಮೀನುಗಾರಿಕೆ)

**ಇವರಿಗೆ**

1) ಪ್ರಧಾನ ಮಹಾಲೇಖಪಾಲರು (ಜಿ&ಎಸ್ಎಸ್ಎ)(ಇ&ಆರ್ಎಸ್ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಬೆಂಗಳೂರು.
2) ಪ್ರಧಾನ ಮಹಾಲೇಖಪಾಲರು (ಎ&ಇ), ಕರ್ನಾಟಕ, ಪಾರ್ಕ್‌ಹೌಸ್ ರಸ್ತೆ, ಬೆಂಗಳೂರು.
3) ಮೀನುಗಾರಿಕೆ ನಿರ್ದೇಶಕರು, ಬೆಂಗಳೂರು.
4) ಜಂಟಿ ನಿರ್ದೇಶಕರು, ಖಜಾನೆ ಗಣಕ ಜಾಲ ನಿರ್ವಹಣಾ ಕೇಂದ್ರ, ಖನಿಜ ಭವನ, ರೇಸ್‌ಕೋರ್ಸ್ ರಸ್ತೆ, ಬೆಂಗಳೂರು.
5) ಆಂತರಿಕ ಆರ್ಥಿಕ ಸಲಹೆಗಾರರು, ಕೃಷಿ, ತೋಟಗಾರಿಕೆ ಮತ್ತು ಪಸಂಮೀ ಇಲಾಖೆ.
6) ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-4), ವಿಧಾನಸೌಧ, ಬೆಂಗಳೂರು.
7) ಖಜಾನಾಧಿಕಾರಿ, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
8) ಸಂಬಂಧಪಟ್ಟವರುಗಳಿಗೆ – ಮೀನುಗಾರಿಕೆ ನಿರ್ದೇಶಕರ ಮುಖಾಂತರ.
9) ಕಂಟ್ರೋಲ್ ರೂಮ್-ಕಂ-24x7 ಹೆಲ್ಪ್ ಲೈನ್(ಸಹಾಯವಾಣಿ), ಮೀನುಗಾರಿಕೆ ಇಲಾಖೆ.
10) ಸರ್ಕಾರದ ಕಾರ್ಯದರ್ಶಿಗಳು / ಜಂಟಿ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿ / ಆಪ್ತ ಸಹಾಯಕರು, ಪಸಂಮೀ ಇಲಾಖೆ, ವಿಕಾಸಸೌಧ, ಬೆಂಗಳೂರು.
11) ಶಾಖಾ ರಕ್ಷಾ ಕಡತ / ಹೆಚ್ಚಿನ ಪ್ರತಿಗಳು / ಸಮನ್ವಯ-ಕಂಪೆಂಡಿಯಂ.